cLL

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

**GSTIN : 29AAALB0060D1ZS**

ಸಂಖ್ಯೆ : ಬೆಂಅಪ್ರಾ/ನಯೋಸ/CLU-120/22-23/3730 /2022-23
No. [Comp No. 180777]

ದಿನಾಂಕ :
Date : 03/03/2023

## ಪ್ರಾರಂಭಿಕ ಪ್ರಮಾಣ ಪತ್ರ

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರನ್ವಯ)

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೆರಟೇನ ಅಗ್ರಹಾರ ಗ್ರಾಮದ ಸರ್ವೆ ನಂ. 9 ರಲ್ಲಿ 2 ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ವಲಯದಿಂದ ವಸತಿ ಉಪಯೋಗಕ್ಕಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 27.07.2022.
2. ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 3.1.19/2022, ದಿನಾಂಕ 19.10.2022.
3. ಈ ಕಛೇರಿಯ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/CLU-120/1814/2022-23, ದಿನಾಂಕ 09.11.2022.
4. ಸರ್ಕಾರದ ಆದೇಶ ಸಂಖ್ಯೆ: ನಅಇ 86 ಬೆಂಅಸೇ 2022, ಬೆಂಗಳೂರು, ದಿನಾಂಕ 30.12.2022.
5. ಈ ಕಛೇರಿಯ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/CLU-120/2712/ 2022-23, ದಿನಾಂಕ 11.01.2023.
6. ಅರ್ಜಿದಾರರು ಕೆನರಾ ಬ್ಯಾಂಕ್ ಚಲನ್ ದಿನಾಂಕ 23.01.2023 ರಂದು ನಂ. GN23016052, ದಿನಾಂಕ 23.01.2023

NOTARY
NAME : ANAND KUMAR.J.
Bangalore Metropolitan Area
Regn. No. 8308
GOVT. OF INDIA

**ಪ್ರಸ್ತಾವನೆ:**

ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೆರಟೇನ ಅಗ್ರಹಾರ ಗ್ರಾಮದ ಸರ್ವೆ ನಂ. 9 ರಲ್ಲಿ 2 ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ವಲಯದಿಂದ ವಸತಿ ಉಪಯೋಗಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡಿಕೊಡುವಂತೆ ಉಲ್ಲೇಖ (1) ರ ಅರ್ಜಿಯಲ್ಲಿ ಕೋರಿದ್ದ ಪ್ರಸ್ತಾವನೆಯನ್ನು ಉಲ್ಲೇಖ (2) ರಂದು ನಡೆದ ಪ್ರಾಧಿಕಾರ ನಗರ ಯೋಜನಾ ಸಮಿತಿ ಸಭೆಯ ತೀರ್ಮಾನದಂತೆ ಉಲ್ಲೇಖ (3) ರ ಈ ಕಛೇರಿಯ ಪತ್ರದಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿತ್ತು.

ಪ್ರಾಧಿಕಾರದಿಂದ ಸಲ್ಲಿಸಲಾಗಿದ್ದ ಭೂಉಪಯೋಗ ಬದಲಾವಣೆ ಪ್ರಸ್ತಾವನೆಗೆ ಉಲ್ಲೇಖ (4) ರ ಸರ್ಕಾರದ ಆದೇಶದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೆರಟೇನ ಅಗ್ರಹಾರ ಗ್ರಾಮದ ಸರ್ವೆ ನಂ. 9 ರಲ್ಲಿ 2 ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ವಲಯದಿಂದ ವಸತಿ ಉಪಯೋಗಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ರಡಿಯಲ್ಲಿನ ಅವಕಾಶದನ್ವಯ



Scanned with OKEN Scanner

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೆರಟೇನ ಅಗ್ರಹಾರ ಗ್ರಾಮದ ಸರ್ವೆ ನಂ. ೯ ರಲ್ಲಿ 2 ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ವಲಯದಿಂದ ವಸತಿ ಉಪಯೋಗಕ್ಕಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ.

---

ಕೈಗಾರಿಕೆ ಉಪಯೋಗದಿಂದ ವಸತಿ ಉದ್ದೇಶಕ್ಕಾಗಿ ಭೂ ಉಪಯೋಗ ಬದಲಾವಣೆಗೆ ಕೆಲವೊಂದು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

ಪ್ರಶ್ನಿತ ಜಮೀನಿನ ಭೂಉಪಯೋಗ ಬದಲಾವಣೆ ಮಾಡುವ ಸಂಬಂಧ ಉಲ್ಲೇಖ (5) ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 18 ರಡಿಯಲ್ಲಿ ಉತ್ತಮತೆ ಶುಲ್ಕ, ಪರಿಶೀಲನಾ ಶುಲ್ಕ ಮತ್ತು ಜಿಎಸ್ ಟಿ ಸೇರಿ ಒಟ್ಟು ಮೊತ್ತ ₹. 4,80,300/- ಗಳನ್ನು ಸಂದಾಯ ಮಾಡುವಂತೆ ಅರ್ಜಿದಾರರಿಗೆ ತಿಳಿಸಲಾಗಿತ್ತು. ಉಲ್ಲೇಖ [6] ರಂತೆ ಅರ್ಜಿದಾರರು ದಿನಾಂಕ 23.01.2023 ರಂದು ₹. 4,80,300/- ಗಳನ್ನು ಪ್ರಾಧಿಕಾರಕ್ಕೆ ಜಮಾ ಮಾಡಿರುತ್ತಾರೆ ಹಾಗೂ ಸದರಿ ಮೊತ್ತವು ಪ್ರಾಧಿಕಾರದ ಲೆಕ್ಕ ಶೀರ್ಷಿಕೆಯಲ್ಲಿ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 16.02.2023 ರಂದು ದೃಢೀಕರಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಸೆಕ್ಷನ್ 14(ಎ) ರ ಅಡಿಯಲ್ಲಿ ಕೈಗಾರಿಕೆ ಉಪಯೋಗದಿಂದ ವಸತಿ ಉಪಯೋಗಕ್ಕೆ ಭೂಉಪಯೋಗ ಬದಲಾವಣೆ ಬಗ್ಗೆ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಆದೇಶ:

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೆರಟೇನ ಅಗ್ರಹಾರ ಗ್ರಾಮದ ಸರ್ವೆ ನಂ. ೯ ರಲ್ಲಿ 2 ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ವಲಯದಿಂದ ವಸತಿ ಉಪಯೋಗಕ್ಕೆ ಭೂ ಉಪಯೋಗ ಬದಲಾವಣೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿನ ಅವಕಾಶದನ್ವಯ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಲಾಗಿದೆ.

### ಷರತ್ತುಗಳು

1. ಅರ್ಜಿದಾರರು ಪ್ರಸ್ತಾಪಿತ ಜಮೀನಿನಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮುನ್ನ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 & 15 ರಡಿಯಲ್ಲಿ ವಲಯ ನಿಯಮಾವಳಿಗಳನ್ವಯ ವಿನ್ಯಾಸ / ಅಭಿವೃದ್ಧಿ / ಮತ್ತು ಕಟ್ಟಡ ನಕ್ಷೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮೋದನೆ ಪಡೆಯತಕ್ಕದ್ದು.
2. ವಸತಿ ಅಭಿವೃದ್ಧಿಗಾಗಿ ಸಂಬಂಧಿಸಿದ ಇಲಾಖೆ / ಸಕ್ಷಮ ಪ್ರಾಧಿಕಾರಗಳಿಂದ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಪಡೆಯತಕ್ಕದ್ದು.
3. ಮಳೆ ನೀರು ಕೊಯ್ಲು ಸಂಗ್ರಹಣೆ ಅಳವಡಿಸಿಕೊಳ್ಳತಕ್ಕದ್ದು.

NOTARY
NAME: ANAND KUMAR.J
Bangalore Metropolitan Area
Regn. No. 8306
GOVT. OF INDIA

Scanned with OKEN Scanner

---

4. ವಸತಿ ಉಪಯೋಗಕ್ಕಾಗಿ ಭೂ ಉಪಯೋಗ ಬದಲಾವಣೆಯಾದ ಜಮೀನಿಗೆ ಜಿಲ್ಲಾಧಿಕಾರಿಗಳಿಂದ ವಸತಿ ಉದ್ದೇಶಕ್ಕಾಗಿ ಭೂ ಪರಿವರ್ತನೆಯನ್ನು ಪಡೆಯತಕ್ಕದ್ದು.
5. ಪ್ರಸ್ತಾವಿತ ಜಮೀನುಗಳನ್ನು ಯಾವ ಉದ್ದೇಶಕ್ಕೆ ಭೂ ಉಪಯೋಗ ಬದಲಾವಣೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಜಾಗವನ್ನು ಉಪಯೋಗಿಸತಕ್ಕದ್ದು.
6. ಪ್ರಸ್ತಾಪಿತ ಜಮೀನಿನ ಸಂಬಂಧವಾಗಿ ತಪ್ಪು ಮಾಹಿತಿ / ದಾಖಲಾತಿಗಳನ್ನು ನೀಡಿದ್ದಲ್ಲಿ ಅರ್ಜಿದಾರರೇ ನೇರ ಹೊಣೆಗಾರರಾಗುವುದಲ್ಲದೇ ಕೆಟಿಸಿಪಿ ಕಾಯ್ದೆ ಕಲಂ 76[0] ರನ್ವಯ ಭೂ ಉಪಯೋಗದ ಆದೇಶ ರದ್ದಾಗುತ್ತದೆಂದು ತಿಳಿಯತಕ್ಕದ್ದು.
7. ಬೆಂಗಳೂರು ಅಭಿವೃದ್ಧಿ ಪ್ರಾದಿಕಾರ ಅಥವಾ ಯಾವುದೇ ಸಕ್ಷಮ ಪ್ರಾಧಿಕಾರಗಳು ಪ್ರಸ್ತಾಪಿಸಿರುವ ರಸ್ತೆಗಳು, ಪ್ರಶ್ನಿತ ಜಮೀನುಗಳ ಮೇಲೆ ಹಾದು ಹೋದಲ್ಲಿ, ರಸ್ತೆಗಾಗಿ ಜಾಗವನ್ನು ಪುಕ್ಕಟೆಯಾಗಿ ಬಿಟ್ಟುಕೊಡುವ ಷರತ್ತಿಗೆ ಒಳಪಟ್ಟಿರುತ್ತದೆ.
8. ಸದರಿ ಜಮೀನಿನಲ್ಲಿ MP ರಸ್ತೆ / RR /SH / NH ಇತ್ಯಾದಿ ರಸ್ತೆ ಪಂಕ್ತೀಕರಣದಲ್ಲಿ ಬರುವ ಜಮೀನನ್ನು ಪ್ರಾಧಿಕಾರಕ್ಕೆ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಪುಕ್ಕಟೆಯಾಗಿ ಹಸ್ತಾಂತರಿಸಬೇಕು ಹಾಗೂ ವಿನ್ಯಾಸ ಅನುಮೋದನೆ ಸಂದರ್ಭದಲ್ಲಿ ರಸ್ತೆ ಮಾರ್ಜಿನ್ ಅನ್ನು ಕಡ್ಡಾಯವಾಗಿ ಬಿಡತಕ್ಕದ್ದು.
9. ಸದರಿ ಜಮೀನಿನಲ್ಲಿ ಹಾದು ಹೋಗುವ ಕೆರೆ / ನಾಲಾ /H.T Line / Substation feeder / Rail Base Mass Transit line / Railway Track ಪ್ರದೇಶಗಳಿಗೆ ನಿಯಮಾನುಸಾರ ಬಫರ್ ಜೋನ್ ನ್ನು ಕಾಯ್ದಿರಿಸತಕ್ಕದ್ದು.
10. ಅನುಮೋದನೆ ನೀಡುವ ಸಮಯದಲ್ಲಿ ಸ್ಥಳೀಯ ಯೋಜನಾ ಪ್ರಾಧಿಕಾರದಿಂದ ಮೂಲ ದಾಖಲಾತಿಗಳನ್ನು ಪರಿಶೀಲಿಸಿ ಅನುಮೋದನೆ ನೀಡತಕ್ಕದ್ದು.
11. ಪ್ರಸ್ತಾಪಿತ ಜಮೀನನ್ನು ಉದ್ದೇಶಿತ ಉಪಯೋಗಕ್ಕೆ ಬಳಸುವ ಮೊದಲು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸಮ್ಮತಿ ಪತ್ರ ಪಡೆಯತಕ್ಕದ್ದು.
12. ಭೂ ಉಪಯೋಗ ಬದಲಾವಣೆಯು ಅಸ್ತಿಯ ಹಕ್ಕಿನ ಪ್ರತಿಪಾದನೆಗೆ ದಾಖಲೆಯಾಗುವುದಿಲ್ಲ ಮತ್ತು ಭೂ ಸುಧಾರಣಾ ಕಾಯ್ದೆಯಡಿ ಹಾಗೂ ಭೂ ಕಂದಾಯ ಕಾಯ್ದೆ-1964 ರ ಕಲಂ 136 (3) ರ ಅಡಿಯಲ್ಲಾಗಲೀ ಅಥವಾ ಇನ್ಯಾವುದೇ ನ್ಯಾಯಾಲಯದಲ್ಲಾಗಲೀ ಪ್ರಕರಣಗಳು ಬಾಕಿ ಇದ್ದಲ್ಲಿ ಭೂ ಉಪಯೋಗ ಬದಲಾವಣೆಯು ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ. ಈ ಬಗ್ಗೆ ಅರ್ಜಿದಾರರಿಂದ ಯಾವುದೇ ನ್ಯಾಯಾಲಯದ ಅಂತಿಮ ಆದೇಶಕ್ಕೆ ಬದ್ಧರಾಗಿರುವುದಾಗಿ ಮತ್ತು ಭೂಉಪಯೋಗ ಬದಲಾವಣೆ ಸಂಬಂಧ ಪಾವತಿಸಲಾದ ಶುಲ್ಕಗಳನ್ನು ವಾಪಸ್ ಕೇಳುವುದಿಲ್ಲವೆಂದು ಸಲ್ಲಿಸಿರುವ ಘೋಷಣಾ ಪತ್ರಕ್ಕೆ ಬದ್ಧರಾಗಿರತಕ್ಕದ್ದು.

Scanned with OKEN Scanner

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೆರಟೇನ ಅಗ್ರಹಾರ ಗ್ರಾಮದ ಸರ್ವೆ ನಂ. ೯ ರಲ್ಲಿ 2 ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ವಲಯದಿಂದ ವಸತಿ ಉಪಯೋಗಕ್ಕಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ.

---

13. ಪ್ರಶ್ನಿತ ಜಮೀನಿಗೆ ಹೊಂದಿಕೊಂಡಂತೆ ಕೆರೆ ಇದ್ದಲ್ಲಿ ಕೆರೆಯ ಅಂಚಿನಿಂದ RMP-2015 ರ ವಲಯ ನಿಯಮಾವಳಿಯನ್ವಯ 30.0ಮೀ ಬಫರ್ ಕಾಯ್ದಿರಿಸತಕ್ಕದ್ದು.
14. ಸರ್ಕಾರದ ಆದೇಶ ಸಂಖ್ಯೆ ನಅಇ 86 ಬೆಂಅಸೇ 2022 [ಇ], ಬೆಂಗಳೂರು, ದಿನಾಂಕ 30.12.2022 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.
15. ಪ್ರಸ್ತಾವನೆಗೆ ಸಂಬಂಧಿಸಿದಂತೆ ಪಿ.ಟಿ.ಸಿ.ಎಲ್. ಕುರಿತು ದಾಖಲಾತಿ, ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.
16. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳನ್ನು ಪಾಲಿಸತಕ್ಕದ್ದು.

ಈ ಮೇಲಿನ ಷರತ್ತುಗಳಿಗೊಳಪಡಿಸಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೆರಟೇನ ಅಗ್ರಹಾರ ಗ್ರಾಮದ ಸರ್ವೆ ನಂ. ೯ ರಲ್ಲಿ 2 ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ವಲಯದಿಂದ ವಸತಿ ಉಪಯೋಗಕ್ಕೆ ಭೂ ಉಪಯೋಗ ಬದಲಾವಣೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿನ ಅವಕಾಶದನ್ವಯ ಅನುಮೋದನೆ ನೀಡಲಾಗಿದೆ.

ಆಯುಕ್ತರು
ಬೆಂಅಪ್ರಾ, ಬೆಂಗಳೂರು

ಇವರಿಗೆ,

ಶ್ರೀ ಸತ್ಯನಾರಾಯಣ,
# 116, New No. 6, 3 ನೇ ಮುಖ್ಯ ರಸ್ತೆ, 1 ನೇ ಅಡ್ಡ ರಸ್ತೆ,
ಶನೇಶ್ವರ ದೇವಸ್ಥಾನ ಪಕ್ಕ, ಮಡಿವಾಳ, ಹೊಸ ಎಕ್ಸ್ ಟೆನ್ಷನ್,
ಬೊಮ್ಮನಹಳ್ಳಿ,
ಬೆಂಗಳೂರು 560 068.

NOTARY
NAME: ANAND KUMAR
GOVT. OF INDIA

Scanned with OKEN Scanner